Vijaya Karnataka

Date: 07-09-2019 Page No: II

Edition: Mysore Language: Kannada

# ಗ್ರಾಮೀಣ-ನಗರ ಅಂತರ ಕಡಿಮೆಯಿಂದ ಪ್ರಗತಿ

**ಮೈಸೂರು:** "ಗ್ರಾಮೀಣ ಪ್ರದೇಶ ಹಾಗೂ ನಗರಗಳ ನಡುವಿನ ಅಂತರ ಕಡಿಮೆಯಾಗುತ್ತಿದ್ದು, ಮೂಲ ಸವಲತ್ತುಗಳನ್ನು ಒದಗಿಸುವಲ್ಲಿ ಪ್ರಗತಿಯಾಗಿದೆ," ಎಂದು ಧರ್ಮಸ್ಥಳ ಧರ್ಮಾಧಿಕಾರಿ ಶ್ರೀ ವೀರೇಂದ್ರ ಹೆಗ್ಗಡೆ ತಿಳಿಸಿದರು.

ನಗರದ ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಕಾಲೇಜಿನಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಇನ್‌ಸ್ಟಿಟ್ಯೂಟ್ ಮ್ಯಾನೇಜ್‌ಮೆಂಟ್ ಅಂಡ್ ಡೆವಲಪ್‌ಮೆಂಟ್ ಸಂಸ್ಥೆಯು ಶುಕ್ರವಾರ ಆಯೋಜಿಸಿದ್ದ 8ನೇ ಅಂತಾರಾಷ್ಟ್ರೀಯ ಹಣಕಾಸು ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

"ಗ್ರಾಮೀಣ ಹಾಗೂ ನಗರಗಳ ನಡುವಿನ ಅಂತರ ಕಡಿಮೆಯಾಗಿದ್ದು, ಇದರಿಂದ ಅವಕಾಶಗಳು ಮತ್ತು ಸೌಲಭ್ಯಗಳು ಎಲ್ಲರಿಗೂ ದೊರೆಯುತ್ತಿದೆ. ಆರೋಗ್ಯ ಸೌಲಭ್ಯಗಳನ್ನು ಪಡೆಯುವುದರಲ್ಲೂ ಪ್ರಗತಿಯಾಗಿದೆ," ಎಂದರು. pII




ಮೈಸೂರಿನ ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಕಾಲೇಜಿನಲ್ಲಿ ನಡೆದ ಅಂತಾರಾಷ್ಟ್ರೀಯ ಹಣಕಾಸು ಸಮ್ಮೇಳನವನ್ನು ಶ್ರೀ ಧರ್ಮಸ್ಥಳದ ಧರ್ಮಾಧಿಕಾರಿ ಶ್ರೀ ವೀರೇಂದ್ರ ಹೆಗ್ಗಡೆ ಉದ್ಘಾಟಿಸಿದರು. ಭೀಮರಾಯಮೇತ್ರಿ, ಡಾ.ಎನ್.ಆರ್. ಪರಶುರಾಮನ್, ಡಾ.ಎಂ.ಶ್ರೀರಾಮ್ ಇತರರು ಇದ್ದರು.